Akashvani : Bangalore
National Bulletin In Kannada
15.04.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಡೆನ್ಮಾರ್ಕ್ ಪ್ರಧಾನಿಯೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದ ಪ್ರಧಾನಿ ನರೇಂದ್ರ ಮೋದಿ
- ವಕ್ಫ್ ತಿದ್ದುಪಡಿ-೨೦೨೫ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಾಳೆ
- ನ್ಯಾಷನಲ್ ಹೆರಾಲ್ಡ್ ಪ್ರಕರಣ; ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿದ ಜಾರಿ ನಿರ್ದೇಶನಾಲಯ
- ಬೆಂಗಳೂರಿನಲ್ಲಿಂದು ವೇವ್ಸ್ ಅನಿಮೆ, ಮಾಂಗಾ ಅರ್ಹತಾ ಸುತ್ತಿನ ಸ್ಪರ್ಧೆ; ವಿಜೇತರು ಅಂತಿಮ ಸುತ್ತಿಗೆ ಆಯ್ಕೆ
- ಐಪಿಎಲ್ ಟಿ-೨೦ ಕ್ರಿಕೆಟ್; ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದು ಡೆನ್ಮಾರ್ಕ್ ಪ್ರಧಾನಿ ಮೆಟ್ಟೆ ಫ್ರೆಡೆರಿಕ್ಸೆನ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಈ ವೇಳೆ ಭಾರತ-ಡೆನ್ಮಾರ್ಕ್ ಹಸಿರು ಕಾರ್ಯತಂತ್ರದ ಪಾಲುದಾರಿಕೆಗೆ ತಮ್ಮ ಬಲವಾದ ಬೆಂಬಲವನ್ನು ಉಭಯ ನಾಯಕರು ಪುನರುಚ್ಚರಿಸಿದರು. ಎರಡೂ ದೇಶಗಳ ಜನರ ಪ್ರಯೋಜನಕ್ಕಾಗಿ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಬಗ್ಗೆ ಚರ್ಚಿಸಿದರು. ಅಲ್ಲದೇ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಉಭಯ ನಾಯಕರು ಚರ್ಚಿಸಿದರು.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ೨೦೨೩ ರ ಬ್ಯಾಚ್‌ನ ಐಎಎಸ್ ಅಧಿಕಾರಿಗಳನ್ನು ರಾಷ್ಟ್ರಪತಿ ಭವನಕ್ಕೆ ಆಹ್ವಾನಿಸಿದ್ದರು. ಈ ವೇಳೆ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದ ರಾಷ್ಟ್ರಪತಿಗಳು, ಅಧಿಕಾರಿಗಳು ಸ್ಥಳೀಯ ಮತ್ತು ರಾಜ್ಯ ಮಟ್ಟದಲ್ಲಿ ನಡೆಸುತ್ತಿರುವ ಅಭಿವೃದ್ಧಿ ಮತ್ತು ಸಾರ್ವಜನಿಕರ ಕಲ್ಯಾಣ ಕಾರ್ಯಕ್ರಮಗಳ ರಾಷ್ಟ್ರೀಯ ಗುರಿಗಳನ್ನು ಸಾಧಿಸಲು ಗಣನೀಯ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು. ಅಧಿಕಾರಿಗಳ ಹಕ್ಕುಗಳು ಮತ್ತು ನಾಗರಿಕ ಸೇವಕರ ಜವಾಬ್ದಾರಿಗಳ ನಡುವಿನ ಸಮತೋಲನವನ್ನು ಕಾಪಾಡಿಕೊಳ್ಳಬೇಕು. ತಮ್ಮ ಜವಾಬ್ದಾರಿಗಳನ್ನು ಪರಿಣಾಮಕಾರಿಯಾಗಿ ಪೂರೈಸುವ ಸಾಧನಗಳಾಗಿ ಹಕ್ಕುಗಳನ್ನು ಅಧಿಕಾರಿಗಳು ನೋಡಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ ನೀಡಿದರು.

<><*<><>*><>

ವಕ್ಫ್ ತಿದ್ದುಪಡಿ ಕಾಯ್ದೆ- ೨೦೨೫ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ನಾಳೆ ವಿಚಾರಣೆ ನಡೆಸಲಿದೆ. ಸುಪ್ರೀಂ ಕೋರ್ಟ್‌ನ ವೆಬ್‌ಸೈಟ್‌ನಲ್ಲಿ ಪ್ರಕಟವಾದ ಪಟ್ಟಿಯ ಪ್ರಕಾರ, ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ.ವಿಶ್ವನಾಥನ್ ನಾಳೆ ಈ ವಿಷಯವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಲಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ೧೯೯೫ ರ ವಕ್ಫ್ ಕಾಯ್ದೆಯಲ್ಲಿ ಇತ್ತೀಚೆಗೆ ಪರಿಚಯಿಸಲಾದ ತಿದ್ದುಪಡಿಗಳ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ, ಸುಪ್ರೀಂ ಕೋರ್ಟ್‌ಗೆ ಹಲವಾರು ಅರ್ಜಿಗಳು ಸಲ್ಲಿಕೆಯಾಗಿವೆ.

<><*<><>*><>

ವಕ್ಫ್ ತಿದ್ದುಪಡಿ ಕಾಯ್ದೆಯು ಜನರ ಹಕ್ಕುಗಳನ್ನು ರಕ್ಷಿಸಲು ಮತ್ತು ದೇಶದ ಯಾವುದೇ ನಾಗರಿಕನ ಭೂಮಿಯನ್ನು ಅಕ್ರಮವಾಗಿ ಕಬಳಿಸುವುದನ್ನು ತಡೆಯಲು ಕೇಂದ್ರ ಸರ್ಕಾರದ ನೀತಿಯ ಭಾಗವಾಗಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

ಕೊಚ್ಚಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರೋಧ ಪಕ್ಷವು ಜನರನ್ನು ದಾರಿ ತಪ್ಪಿಸುತ್ತಿದೆ. ವಕ್ಫ್ ತಿದ್ದುಪಡಿ ಕಾಯ್ದೆಯು ಯಾವುದೇ ಸಮುದಾಯವನ್ನು ಗುರಿಯಾಗಿಸಿಕೊಂಡಿಲ್ಲ. ಅನೇಕ ಮುಸ್ಲಿಂ ಸಂಘಟನೆಗಳು ಕಾನೂನನ್ನು ಬೆಂಬಲಿಸಿ ಮುಂದೆ ಬಂದಿವೆ ಎಂದು ಹೇಳಿದರು.

ಧ್ವನಿ; ಕಿರಣ್ ರಿಜಿಜು ( ೨೦ ಸೆಕೆಂಡ್ಸ್ )

<><*<><>*><>

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಹಣ ವರ್ಗಾವಣೆ ಆರೋಪದ ಮೇಲೆ ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಇತರರ ವಿರುದ್ಧ ಜಾರಿ ನಿರ್ದೇಶನಾಲಯ-ಇಡಿ ಆರೋಪಪಟ್ಟಿ ಸಲ್ಲಿಸಿದೆ. ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಆರೋಪಪಟ್ಟಿಯನ್ನು ಪರಿಶೀಲಿಸಿ, ಮುಂದಿನ ವಿಚಾರಣೆಯನ್ನು ಏಪ್ರಿಲ್ ೨೫ ಕ್ಕೆ ಮುಂದೂಡಿದರು. ಆರೋಪಪಟ್ಟಿಯಲ್ಲಿ ಕಾಂಗ್ರೆಸ್ ನಾಯಕರಾದ ಸ್ಯಾಮ್ ಪಿತ್ರೋಡಾ ಮತ್ತು ಸುಮನ್ ದುಬೆ ಅವರನ್ನೂ ಆರೋಪಿಗಳೆಂದು ಹೆಸರಿಸಲಾಗಿದೆ.

<><*<><>*><>

ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆಯ ರಾಜ್ಯ ಮಟ್ಟದ ಅರ್ಹತಾ ಸುತ್ತಿನ ಸ್ಪರ್ಧಿಗಳನ್ನು ಆಯ್ಕೆ ಮಾಡಲು, ಭಾರತೀಯ ಸಂವಹನ ಮತ್ತು ಮನರಂಜನಾ ಸಂಘ, ಬೆಂಗಳೂರಿನ ಬಸವನಗುಡಿಯ ವಿವಿಎನ್ ಪದವಿ ಕಾಲೇಜಿನಲ್ಲಿ ಡಬ್ಲ್ಯೂಎಎಂ ಅಂದರೆ ವೇವ್ಸ್ ಅನಿಮೆ ಮತ್ತು ಮಂಗಾ ಸ್ಪರ್ಧೆ ಆಯೋಜಿಸಿತ್ತು. ೧೨೧ ಸ್ಪರ್ಧಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಡಬ್ಲ್ಯೂಎಎಂ ಆನಿಮೆ ಮತ್ತು ಮಾಂಗಾ ಎಂಬುದು ಜಪಾನ್ ಶೈಲಿಯ ಅನಿಮೇಶನ್ ಮತ್ತು ಕಾಮಿಕ್ಸ್ ಕಲೆಯಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಭಾರತೀಯ ಸಂವಹನ ಮತ್ತು ಮನರಂಜನ ಸಂಘದ ಅಧ್ಯಕ್ಷರಾದ ಸುಶೀಲ್ ಬಸೀನ್ ಮಾಹಿತಿ ಹಂಚಿಕೊಂಡಿದ್ದಾರೆ. ಅರ್ಹತಾ ಸುತ್ತಿನ ಸ್ಪರ್ಧಿ ಮುಂಬೈನಲ್ಲಿ ವೇವ್ಸ್ - ೨೦೨೫ರ ವೇಳೆ ನಡೆಯುವ ಡಬ್ಲ್ಯೂಎಎಂ ರಾಷ್ಟ್ರೀಯ ಅಂತಿಮ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ. ಈ ಕುರಿತು ಮಾತನಾಡಿರುವ ಭಾರತೀಯ ಸಂವಹನ ಮತ್ತು ಮನರಂಜನಾ ಸಂಘದ ಕಾರ್ಯದರ್ಶಿ ಅಂಕುರ್ ಭಾಸಿನ್, ಬೆಂಗಳೂರು ನಾವೀನ್ಯತೆ ಮತ್ತು ಸೃಜನಶೀಲತೆ ಕೇಂದ್ರವಾಗಿದ್ದು, ಇಲ್ಲಿಂದ ಹೊರಹೊಮ್ಮುವ ಕ್ರಿಯಾತ್ಮಕ ಡಿಜಿಟಲ್ ಕಲೆಯನ್ನು ವೀಕ್ಷಿಸಲು ಉತ್ಸುಕರಾಗಿದ್ದೇವೆ ಎಂದು ತಿಳಿಸಿದ್ದಾರೆ. ಮಾಂಗಾ ಸ್ಪರ್ಧೆಯಲ್ಲಿ ರೋಹಿತ್ ಶರ್ಮಾ, ಮುಕುಂದ.ಕೆ, ವೆಬ್ಟೂನ್ ಸ್ಪರ್ದೆಯಲ್ಲಿ ವಿಶಾಲ್ ಮರವೀ, ಅನಿಮೆ ಸ್ಪರ್ಧೆಯಲ್ಲಿ ಗಣೇಶ್ ವಿಜೇತರಾಗಿದ್ದಾರೆ. ವೇಷಧಾರಣೆಯುಳ್ಳ ಪ್ರದರ್ಶನದಲ್ಲಿ ಪುನೀತ್.ವಿ- ಪ್ರಥಮ, ಪ್ರೇರಣ- ದ್ವಿತೀಯ, ಶೆರೋನ್ ಡಿಸೋಜಾ- ತೃತೀಯ ಸ್ಥಾನ ಗಳಿಸಿದ್ದಾರೆ. ಇನ್ನು ಧ್ವನಿ ಅಭಿನಯ ಸ್ಪರ್ಧೆಯಲ್ಲಿ ಪೂನಂ ತ್ರಿಪಾಠಿ- ಪ್ರಥಮ ಹಾಗೂ ಶೆರೋನ್ ಡಿಸೋಜಾ ದ್ವಿತೀಯ ಸ್ಥಾನ ಪಡೆದಿದ್ದಾರೆ. ಈ ವಿಜೇತರು ಅಂತಿಮ ಹಂತಕ್ಕೆ ಅರ್ಹತೆ ಪಡೆದಿದ್ದಾರೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ನಡೆಯುತ್ತಿರುವ ಸ್ಪರ್ಧೆ ಭಾರತದ ಅತಿದೊಡ್ಡ ಮಾಧ್ಯಮ ಸಂವಹನ ವೇದಿಕೆಯಾದ ವಿಶ್ವ ಶ್ರವಣ-ದೃಶ ಮನೋರಂಜನಾ ಶೃಂಗಸಭೆ - ವೇವ್ಸ್‌ನ ಭಾಗವಾಗಿದೆ.

<><*<><>*><>

ವಿಶ್ವ ಶ್ರವಣ, ದೃಶ್ಯ ಮನರಂಜನಾ ಶೃಂಗಸಭೆ- ವೇವ್ಸ್, ಜಾಗತಿಕ ಮನರಂಜನಾ ಪರಿಸರ ವ್ಯವಸ್ಥೆಯಾಧಾರಿತ ವೃತ್ತಿಪರರು ಮತ್ತು ಸೃಜನಶೀಲರನ್ನು ಕ್ರಿಯಾತ್ಮಕ ಕ್ರಿಯೆಯಲ್ಲಿ ತೊಡಗಿಸುವ ಕ್ರಾಂತಿಕಾರಿ ಆನ್‌ಲೈನ್ ವೇದಿಕೆಯಾಗಿದೆ ಎಂದು ಬಾಲಿವುಡ್ ನಟ ಅಮೀರ್ ಖಾನ್ ಹೇಳಿದ್ದಾರೆ. ಆಂಗ್ಲ ದಿನಪತ್ರಿಕೆಯೊಂದಕ್ಕೆ ಬರೆದಿರುವ ಲೇಖನದಲ್ಲಿ ಅವರು, ಮಾಧ್ಯಮ ಮತ್ತು ಮನರಂಜನಾ ಉದ್ಯಮಕ್ಕೆ ಉನ್ನತ ವ್ಯಾಪರ ಕೇಂದ್ರವಾಗಿ ಕಾರ್ಯ ನಿರ್ವಹಿಸಲು ವೇವ್ಸ್ ಪ್ರಯತ್ನಿಸುತ್ತವೆ. ವೃತ್ತಿಪರರು ತಮ್ಮ ವ್ಯಾಪ್ತಿಯನ್ನು ವಿಸ್ತರಿಸಲು ಹೊಸ ಅವಕಾಶಗಳನ್ನು ಅನ್ವೇಷಿಸಲು ಮತ್ತು ಹೆಚ್ಚಿನ ಮೌಲ್ಯದ ಪಾಲುದಾರಿಕೆಯಲ್ಲಿ ತೊಡಗಿಸಿಕೊಳ್ಳಲು ವೇವ್ಸ್ ಅನುವು ಮಾಡಿಕೊಡುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕೇಂದ್ರ ಸರ್ಕಾರದ ಪ್ರಯತ್ನಗಳನ್ನು ಶ್ಲಾಘಿಸಿದ ನಟ ಅಮೀರ್ ಖಾನ್, ವೇವ್ಸ್ ಮೂಲಕ ಜಾಗತಿಕ ಮನರಂಜನಾ ಸಮುದಾಯಕ್ಕೆ ಹೆಚ್ಚು ಸಹಕಾರಿ ಮತ್ತು ಅಂತರ್ಗತ ಭವಿಷ್ಯವನ್ನು ರಚಿಸುವತ್ತ ಭಾರತ ದಿಟ್ಟ ಹೆಜ್ಜೆ ಇಡುತ್ತದೆ ಎಂದು ಹೇಳಿದ್ದಾರೆ.

<><*<><>*><>

ಡಿಜಿಟಲ್ ಬಂಧನ ಅಂದರೆ ದೂರವಾಣಿ ಮೂಲಕ ಬೆದರಿಕೆ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಕೇಂದ್ರ ತನಿಖಾ ದಳ- ಸಿಬಿಐ, ನಾಲ್ವರನ್ನು ಬಂಧಿಸಿದೆ. ಆಪರೇಷನ್ ಚಕ್ರ-೫ ಭಾಗವಾಗಿ ಮಹಾರಾಷ್ಟ್ರ, ಉತ್ತರಪ್ರದೇಶ, ಪಶ್ಚಿಮ ಬಂಗಾಳ ಮತ್ತು ರಾಜಸ್ಥಾನ ರಾಜ್ಯಗಳ ೧೨ ಸ್ಥಳಗಳಲ್ಲಿ ವ್ಯಾಪಕ ಶೋಧ ಕಾರ್ಯಾಚರಣೆ ನಡೆಸಿದ ನಂತರ ಸಿಬಿಐ ಅಧಿಕಾರಿಗಳು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. ರಾಜಸ್ಥಾನದ ಜುನ್‌ಜುನು ಸೈಬರ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣವನ್ನು ಸಿಬಿಐ ವಹಿಸಿಕೊಂಡಿದೆ. ವಿವಿಧ ಕಾನೂನು ಜಾರಿ ಸಂಸ್ಥೆಗಳ ಹೆಸರಿನಲ್ಲಿ ಈ ಸೈಬರ್ ಆರೋಪಿಗಳು, ಸಂತ್ರಸ್ತರನ್ನು ಮೂರು ತಿಂಗಳಿಗೂ  ಹೆಚ್ಚು ಕಾಲ ಡಿಜಿಟಲ್ ರೂಪದಲ್ಲಿ ವಶಕ್ಕೆ ಪಡೆದಿದ್ದರು. ಅವರಿಂದ ೭ ಕೋಟಿ ೬೭ ಲಕ್ಷ ರೂಪಾಯಿಗೂ ಹೆಚ್ಚು ಹಣವನ್ನು ಸುಲಿಗೆ ಮಾಡಿದ್ದರು. ಸಿಬಿಐ ಅಧಿಕಾರಿಗಳು, ಶೋಧ ಕಾರ್ಯಾಚರಣೆಯ ವೇಳೆ ಆರೋಪಿಗಳಿಂದ ಬ್ಯಾಂಕ್ ಖಾತೆ ವಿವರಗಳು, ಡೆಬಿಟ್ ಕಾರ್ಡ್, ಚೆಕ್‌ಬುಕ್‌ಗಳು ಸೇರಿದಂತೆ ಡಿಜಿಟಲ್ ಸಾಧನಗಳನ್ನು ವಶಪಡಿಸಿಕೊಂಡಿದ್ದಾರೆ.

<><*<><>*><>

ಈ ವರ್ಷದ ಜೂನ್‌ನಿಂದ ಸೆಪ್ಟಂಬರ್‌ವರೆಗೆ ನೈಋತ್ಯ ಮುಂಗಾರು ಮಳೆ ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರಿಗೆ ಮಾಹಿತಿ ನೀಡಿದ ಭಾರತೀಯ ಹವಾಮಾನ ಇಲಾಖೆಯ ಮಹಾ ನಿರ್ದೇಶಕ ಡಾ.ಮೃತ್ಯುಂಜಯ ಮೊಹಾಪಾತ್ರ, ಈಶಾನ್ಯ, ವಾಯವ್ಯ ಮತ್ತು ದಕ್ಷಿಣ ಭಾಗದ ಕೆಲವು ಭಾಗಗಳನ್ನು ಹೊರತುಪಡಿಸಿ, ದೇಶದ ಹೆಚ್ಚಿನ ಭಾಗಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು. ಮುಂಗಾರು ಹಂಗಾಮಿನಲ್ಲಿ ತಟಸ್ಥ ಎಲ್ ನಿನೊ ಪರಿಸ್ಥಿತಿಗಳು ಮುಂದುವರಿಯುವ ಸಾಧ್ಯತೆಯಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಚಂಡೀಗಢದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಪೋಷಕರು ಮತ್ತು ವಿದ್ಯಾರ್ಥಿಗಳ ಮೇಲಿನ ಕಿರುಕುಳ ಹಾಗೂ ಅತಿಯಾದ ಶುಲ್ಕದ ಕುರಿತು ದೂರುಗಳ ವಿರುದ್ಧ ದೆಹಲಿಯ ಎಲ್ಲಾ ಶಾಲೆಗಳಿಗೆ ದೆಹಲಿ ಸರ್ಕಾರ ನೋಟಿಸ್ ನೀಡಿದೆ. ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಯಾವುದೇ ಪೋಷಕರು ಅಥವಾ ಮಗುವಿಗೆ ಕಿರುಕುಳ ನೀಡುವ, ಶಾಲೆಯಿಂದ ಹೊರಹಾಕುವುದಾಗಿ ಬೆದರಿಕೆ ಹಾಕುವ, ಸಾಮಾನ್ಯ ಶುಲ್ಕವನ್ನು ಹೆಚ್ಚಿಸುವ ಹಕ್ಕು ಯಾವುದೇ ಶಾಲೆಗಳಿಗಿಲ್ಲ. ದೆಹಲಿ ಸರ್ಕಾರವು ಅಂತಹ ಯಾವುದೇ ಕ್ರಮಗಳನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ಒಂದು ಸಾವಿರದ ೫೭೮ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೬ ಸಾವಿರದ ೭೩೫ ಅಂಕಗಳು ದಾಖಲಾಗಿದೆ.

ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೫೦೦ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೩೨೯ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಭಾರತೀಯ ರೂಪಾಯಿ ಮೌಲ್ಯ ೮೫ ರೂಪಾಯಿ ೭೭ ಪೈಸೆಯಷ್ಟಾಗಿದೆ.

<><*> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>